# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ:29:ಇಭಾತ:2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು. ದಿನಾಂಕ:04.04.2013

## ಅಧಿಕೃತ ಜ್ಞಾಪನ

**ವಿಷಯ:**– ಬೆಳಗಾಂ ವಿಭಾಗದ ಬಿಜಾಪುರ ಜಿಲ್ಲೆಯಲ್ಲಿ ಹಾಗೂ ಗುಲ್ಬರ್ಗಾ ವಿಭಾಗದಲ್ಲಿ ಬೇಸಿಗೆ ಕಾಲದಲ್ಲಿ ಕಛೇರಿ ಕೆಲಸದ ವೇಳೆಯನ್ನು ನಿಗದಿಪಡಿಸುವ ಬಗ್ಗೆ.

**ಉಲ್ಲೇಖ:**–1) ದಿನಾಂಕ:24.10.1994ರ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ:34:ಇಆಸು:1994.
2) ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪತ್ರ ಸಂಖ್ಯೆ: ಜಿಇಎ:247:2012–13 ದಿನಾಂಕ:20.03.2013

* * *

ಇ ವಿಭಾಗ–1
05/04/2013

ಗುಲ್ಬರ್ಗಾ ವಿಭಾಗದಲ್ಲಿರುವ ಜಿಲ್ಲೆಗಳಲ್ಲಿ ಮತ್ತು ಬಿಜಾಪುರ ಜಿಲ್ಲೆಯಲ್ಲಿರುವ ಕರ್ನಾಟಕ ಸರ್ಕಾರಿ ಕಛೇರಿಗಳ ಕೆಲಸದ ವೇಳೆಯನ್ನು ದಿನಾಂಕ:24.10.1994ರ ಅಧಿಕೃತ ಜ್ಞಾಪನದಲ್ಲಿ ಕೇಂದ್ರ ಸರ್ಕಾರದ ಕಛೇರಿಗಳ ಮತ್ತು ಬ್ಯಾಂಕ್‌ಗಳ ಕೆಲಸದ ಅವಧಿಯನ್ನು ರಾಜ್ಯ ಸರ್ಕಾರದ ಕಛೇರಿಗಳಿಗೂ ಸಹ ಅನ್ವಯಿಸಿ, ಬೆಳಗ್ಗೆ 10.00 ರಿಂದ ಸಂಜೆ 5:30 ರವರೆಗೆ ನಿಗದಿಪಡಿಸಿ ಆದೇಶಿಸಲಾಗಿತ್ತು.

ಆದರೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ಸರ್ಕಾರಕ್ಕೆ ಮನವಿಗಳನ್ನು ಸಲ್ಲಿಸಿ, ಮೇಲೆ ತಿಳಿಸಿದ ಪ್ರದೇಶಗಳಲ್ಲಿ ಉಷ್ಣತಾ ತಾಪಮಾನ ಹೆಚ್ಚಿನ ಪ್ರಮಾಣದಲ್ಲಿರುವುದರಿಂದ ರಾಜ್ಯ ಸರ್ಕಾರದ ಕಛೇರಿಗಳು ಪಟ್ಟಣ ಮತ್ತು ಹಳ್ಳಿ ಪ್ರದೇಶಗಳಲ್ಲಿ ಹಾಗೂ ಕೃಷ್ಣಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದಂತೆ, ಕ್ಯಾಂಪ್‌ಗಳಲ್ಲಿ ಎ.ಸಿ.ಸಿ. ಶೀಟ್‌ಗಳಿಂದ ನಿರ್ಮಿಸಿದ ಶೆಡ್‌ಗಳಲ್ಲಿಯೂ ಫ್ಯಾನ್‌ಗಳ ಸೌಲಭ್ಯವಿಲ್ಲದೆಯೇ ಕೆಲಸ ನಿರ್ವಹಿಸಲಾಗುತ್ತಿರುವುದರಿಂದ ಆದ್ದರಿಂದ ತಿಂಗಳಲ್ಲಿ ಮಧ್ಯಾಹ್ನದ ಅವಧಿಯಲ್ಲಿ ತೀರಾ ತೊಂದರೆ ಇರುವ ಕಾರಣ, ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಹಿಂದಿನಂತೆ ಬೆಳಿಗ್ಗೆ 8:00 ರಿಂದ ಮಧ್ಯಾಹ್ನ 1:30 ರವರೆಗೆ ಕೆಲಸದ ಅವಧಿಯನ್ನು ಮುಂದುವರಿಸಬೇಕೆಂದು ಕೋರಿದ್ದಾರೆ. ಮೇಲಿನ ಅಂಶಗಳ ಹಿನ್ನಲೆಯಲ್ಲಿ, ಬೆಳಗಾಂ ವಿಭಾಗದ ಬಿಜಾಪುರ, ಬಾಗಲಕೋಟೆ ಜಿಲ್ಲೆಗಳಿಗೆ ಹಾಗೂ ಗುಲ್ಬರ್ಗಾ ವಿಭಾಗದ ಎಲ್ಲ ಜಿಲ್ಲೆಗಳಿಗೆ ಬೇಸಿಗೆ ಕಾಲದಲ್ಲಿ ಕೆಲಸದ ವೇಳೆಯನ್ನು ಮುಂದಿನ ಆದೇಶದವರೆಗೆ 2013–14ನೇ ಸಾಲಿನ ಏಪ್ರಿಲ್ ಮತ್ತು ಮೇ

...2

Thank you for trying PDF Suite

೨



ತಿಂಗಳಲ್ಲಿ ರಾಜ್ಯ ಸರ್ಕಾರಿ ಆಡಳಿತ ಕಛೇರಿಗಳ ವೇಳಾವಧಿಯನ್ನು ಬೆಳಿಗ್ಗೆ 8:00 ರಿಂದ ಮಧ್ಯಾಹ್ನ 1:30 ರವರೆಗೆ ನಿರ್ವಹಿಸಲು ಆದೇಶಿಸಲಾಗಿದೆ.

(ಡಾ. ಗೀತಾ.ಎಲ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಆಡಳಿತ ಸುಧಾರಣೆ-ತರಬೇತಿ)
(ದೂರವಾಣಿ ಸಂಖ್ಯೆ:22032655)

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು - ಇವರಿಗೆ ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ 500 ಮುದ್ರಿತ ಪ್ರತಿಗಳನ್ನು ಸರ್ಕಾರಕ್ಕೆ ಒದಗಿಸಲು ಕೋರಿದೆ.

ಪ್ರತಿ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು / ಅಪರ ಕಾರ್ಯದರ್ಶಿಗಳು / ಸಹ ಕಾರ್ಯದರ್ಶಿಗಳು / ಉಪ ಕಾರ್ಯದರ್ಶಿಗಳು / ಅಧೀನ ಕಾರ್ಯದರ್ಶಿಗಳು.
3. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು / ಎಲ್ಲಾ ಜಿಲ್ಲಾಧಿಕಾರಿಗಳು / ಎಲ್ಲಾ ಉಪ ವಿಭಾಗಾಧಿಕಾರಿಗಳು / ಎಲ್ಲಾ ಸಹಾಯಕ ಆಯುಕ್ತರು / ಎಲ್ಲಾ ಜಿಲ್ಲಾ ಪಂಚಾಯತ್ತಿನ ಮುಖ್ಯ ಕಾರ್ಯನಿರ್ವಾಹಣಾ ಅಧಿಕಾರಿಗಳು.
4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ರವರ ಆಪ್ತ ಕಾರ್ಯದರ್ಶಿ.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಒಳಾಡಳಿತ ಇಲಾಖೆ.
10. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
11. ಎಲ್ಲಾ ಸಚಿವರುಗಳು / ರಾಜ್ಯ ಸಚಿವರುಗಳ ಆಪ್ತ ಕಾರ್ಯದರ್ಶಿಯವರಿಗೆ.
12. ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಬೆಂಗಳೂರು.
13. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
14. ವಾರ ಪತ್ರ / ಹೆಚ್ಚುವರಿ ಪ್ರತಿ.

Thank you for trying PDF Suite

**ಹಿಂಬರಹ**

ಸಂಖ್ಯೆ: ಡಿಟಿಇ 1 ಇಎಸ್‌ಟಿ(9) 2013, ದಿನಾಂಕ: 05-04-2013

ಮೇಲ್ಕಂಡ ಸರ್ಕಾರಿ ಅಧಿಕೃತ ಜ್ಞಾಪನದ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1) ಈ ಇಲಾಖೆಗೆ ಅಧೀನಕ್ಕೊಳಪಡುವ ಬೆಳಗಾಂ ವಿಭಾಗದ ಬಿಜಾಪುರ, ಬಾಗಲಕೋಟೆ ಜಿಲ್ಲೆಗಳಲ್ಲಿ ಹಾಗೂ ಗುಲ್ಬರ್ಗಾ ವಿಭಾಗದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳು, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ
2) ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳಿಗೆ ಮಾಹಿತಿಗಾಗಿ
3) ನಿರ್ದೇಶನಾಲಯದ ಇಎಸ್‌ಟಿ (7) ವಿಭಾಗಕ್ಕೆ ಮಾಹಿತಿಗಾಗಿ.
4) ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

O/c

ಆಡಳಿತಾಧಿಕಾರಿ.

5) ಸಹಾಯಕ ಆಡಳಿತಾಧಿಕಾರಿಗಳು : 1) 9/4/13 2) 3) 09/04/2013

6) ಸಾರ್ವಜನಿಕ ಸಂಪರ್ಕಾಧಿಕಾರಿಗಳು :-

ರವಾನಿಸಿದೆ
ಸಂ 141
ದಿ 9/4/2013
ಇಂದ

P est(9)-G.O.

Thank you for trying PDF Suite